# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿ
ಟಿ.ದಾಸರಹಳ್ಳಿ ಉಪ ವಿಭಾಗ, ದಾಸರಹಳ್ಳಿ ವಲಯ
ಮಾರಮ್ಮ ದೇವಸ್ಥಾನದ ಹತ್ತಿರ, ಬಾಗಲಗುಂಟೆ

ಸಂಖ್ಯೆ:ಬೃ.ಬೆಂ.ಮ.ಪಾ/ದಾ.ವ/ಸ.ಅ/ವಾ.15/ಪಿಆರ್: 11 :2020-21 ದಿನಾಂಕ: 20.03.2021

## ದಾಸರಹಳ್ಳಿ ವಾರ್ಡ್-15ರ ವಾರ್ಡ್ ಸಭೆಯ ನಡವಳಿ

ದಿ.20.03.2021 ರಂದು ಬೆಳಗ್ಗೆ 11.30 ಗಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಶ್ರೀ.ಅಶೋಕ್ ಹಿಂದಾ, ವಾರ್ಡ್ ಕಮಿಟಿ ನೋಡೆಲ್ ಆಫೀಸರ್ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**ಹಾಜರಿದ್ದವರು:**

1. ಶ್ರೀಮತಿ.ಅರ್ಚನ, ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು, ದಾಸರಹಳ್ಳಿ ವಾರ್ಡ್ ನಂ.15
2. ಶ್ರೀ.ಪಾರ್ಥ, ಹಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
3. ಶ್ರೀಮತಿ.ಚೈತ್ರ, ಕಿರಿಯ ಆರೋಗ್ಯ ಪರಿವೀಕ್ಷಕರು (ವಾ.ನಂ.15)
4. ಶ್ರೀ.ಮಂಜುನಾಥ್, ಕಾಮಗಾರಿ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ
5. ಶ್ರೀ.ಸತೀಶ್, ವಿದ್ಯುತ್ ಇಲಾಖೆ, ಬಿಬಿಎಂಪಿ, ದಾಸರಹಳ್ಳಿ
6. ಶ್ರೀ.ಚಂದ್ರಶೇಖರ್, ವಾರ್ಡ್ ಸಮಿತಿ ಸದಸ್ಯರು, ದಾಸರಹಳ್ಳಿ

ಶ್ರೀ.ಅಶೋಕ್ ಹಿಂದಾ, ನೋಡೆಲ್ ಅಧಿಕಾರಿ ಹಾಗೂ ಶ್ರೀಮತಿ.ಅರ್ಚನಾ, ಸದಸ್ಯ ಕಾರ್ಯದರ್ಶಿಗಳು, ವಾರ್ಡ್ ನಂ.15, ದಾಸರಹಳ್ಳಿ ರವರುಗಳು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸಭೆಯ ಸದಸ್ಯರು ಹಾಗೂ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ ಮಾತನಾಡುತ್ತಾ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರತೀ ವಾರ್ಡ್‌ಗೆ ನೋಡೆಲ್ ಅಧಿಕಾರಿಗಳನ್ನು ನೇಮಿಸಿ, ಸಾರ್ವಜನಿಕ ಕುಂದುಕೊರತೆ ನಿವಾರಣಾ ಸಂಬಂಧ ಪ್ರತೀ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಸಭೆ ಸೇರಿ ವಾರ್ಡ್‌ನ ಕುಂದುಕೊರತೆಗಳ ಬಗ್ಗೆ ಚರ್ಚಿಸಿ, ಅಗತ್ಯ ಕ್ರಮವಹಿಸಲು ಸೂಚಿಸಿರುವುದಾಗಿ ತಿಳಿಸಿದರು.

### 1. ಹಿಂದಿನ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು ಹಾಗೂ ದೂರುಗಳಿಗೆ ಸಂಬಂಧಪಟ್ಟಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ.

ದಿ.20.02.2021 ರಂದು ದಾಸರಹಳ್ಳಿ ವ್ಯಾಪ್ತಿಯ ಕಾಳಾಸ್ತಿನಗರದ ಸರ್ಕಾರಿ ಶಾಲೆ ರಸ್ತೆಯ ಚರಂಡಿಗಳಲ್ಲಿ ಹೂಳು ತುಂಬಿದ್ದು, ನೀರು ಸರಾಗವಾಗಿ ಹರಿಯದೇ ಚರಂಡಿಯಲ್ಲಿಯೇ ನಿಂತಿರುವ ಕಾರಣ ಸೊಳ್ಳೆಗಳು ಹೆಚ್ಚಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಬಗ್ಗೆ ಹಿಂದಿನ ಸಭೆಯಲ್ಲಿ ಚರ್ಚಿಸಲಾಗಿ, ಸದರಿ ಹೂಳು ತೆಗೆಯುವ ಕಾರ್ಯ ಪ್ರಗತಿಯಲ್ಲಿರುತ್ತದೆ ಎಂದು ವಾರ್ಡ್ ಅಭಿಯಂತರರು ಸಭೆಯಲ್ಲಿ ತಿಳಿಸಿದರು.

Scanned By Scanner Go

**2. ಕೋವಿಡ್-19 ಸೋಂಕು ಹರಡುವುದನ್ನು ತಡೆಗಟ್ಟುವ ಸಂಬಂಧ ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ.**

ವಾರ್ಡ್‌ನ ಆರೋಗ್ಯ ಪರಿವೀಕ್ಷಕರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಚರ್ಚಿಸಿ, ಪ್ರತೀ ದಿನ 02 ಮೊಬೈಲ್ ಟೀಂ ನ ಮೂಲಕ ರೋಗ ಪತ್ತೆ ಕಾರ್ಯವನ್ನು ನಡೆಸಲಾಗುತ್ತಿರುತ್ತದೆ. ಅದರಲ್ಲಿ ಒಟ್ಟು ಪಾಸಿಟಿವ್ ಕೇಸ್ 1062, ಒಟ್ಟು ಬಿಡುಗಡೆ 1031, ಮರಣ ಹೊಂದಿದವರು 07 ಹಾಗೂ ಒಟ್ಟು Active case ಪ್ರಕರಣಗಳು 24 ಇರುತ್ತದೆಂದು ಸಭೆಯಲ್ಲಿ ತಿಳಿಸಿದರು. ಸಾರ್ವಜನಿಕರು ಹೆಚ್ಚಾಗಿ ಆಗಮಿಸುವ ಪ್ರದೇಶಗಳಲ್ಲಿ ತಾತ್ಕಾಲಿಕ ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ಕ್ರಮವಹಿಸಿರುವ ಬಗ್ಗೆ ಸಭೆಯಲ್ಲಿ ತಿಳಿಸಲಾಯಿತು. ಹಾಗೂ ಪ್ರತೀ ದಿನ ರಸ್ತೆ ಮುಂಗಟ್ಟುಗಳಲ್ಲಿರುವ ಸಾರ್ವಜನಿಕರುಗಳಿಗೆ ಕೋವಿಡ್ ಪರೀಕ್ಷೆ ನಡೆಸಲಾಗುತ್ತಿರುತ್ತದೆ.

ಈಗಾಗಲೇ ಎರಡನೇ ಕೋವಿಡ್ ಅಲೆಯು ಹೆಚ್ಚಾಗುತ್ತಿರುವ ಕಾರಣ ಸಾರ್ವಜನಿಕ ಸ್ಥಳಗಳಲ್ಲಿ ಹಾಗೂ ಸಭೆ ಸಮಾರಂಭಗಳಲ್ಲಿ ಹೆಚ್ಚು ಜನರು ಸೇರದಂತೆ, ಸಾಮಾಜಿಕ ಅಂತರ ಹಾಗೂ ಮಾಸ್ಕ್‌ಗಳನ್ನು ಕಡ್ಡಾಯವಾಗಿ ಧರಿಸುವಂತೆ ಹಾಗೂ ಈಗಾಗಲೇ ಕೋವಿಡ್ ಲಸಿಕೆ ನೀಡುತ್ತಿರುವುದರಿಂದ ಸಾರ್ವಜನಿಕರಿಗೆ ಕೋವಿಡ್‌ಗೆ ಸಂಬಂಧಪಟ್ಟಂತೆ ಯಾವುದೇ ರೋಗ ಲಕ್ಷಣಗಳು ಕಂಡುಬಂದಲ್ಲಿ ನಿರ್ಲಕ್ಷ್ಯತನ ತೋರದೆ, ಸ್ವಯಂ ಪ್ರೇರಿತರಾಗಿ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪರೀಕ್ಷೆಗೆ ಒಳಪಟ್ಟು, ಚಿಕಿತ್ಸೆಯನ್ನು ಪಡೆಯಲು ಸಾರ್ವಜನಿಕರಿಗೆ ಅರಿವು ಮೂಡಿಸುವ ಬಗ್ಗೆ ಕ್ರಮವಹಿಸಲು ಆರೋಗ್ಯ ಪರಿವೀಕ್ಷಕರು ರವರುಗಳಿಗೆ ನೋಡಲ್ ಅಧಿಕಾರಿಗಳು ಸಭೆಯಲ್ಲಿ ತಿಳಿಸಿದರು.

ಕಡ್ಡಾಯವಾಗಿ ಮಾಸ್ಕ್ ಧರಿಸುವ ಸಂಬಂಧ ಫೀಲ್ಡ್ ಮಾರ್ಷಲ್‌ಗಳ ಸಮನ್ವಯದೊಂದಿಗೆ ಜನಜಾಗೃತಿ ಮೂಡಿಸಲಾಗುತ್ತಿದೆ ಅದರಂತೆ ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುವವರಿಗೆ ಕಡ್ಡಾಯವಾಗಿ ನಿಯಮಾನುಸಾರ ರೂ.250.00 ಗಳನ್ನು ದಂಡ ವಿಧಿಸಿ ಕ್ರಮ ಜರುಗಿಸಲಾಗುತ್ತಿದ್ದು, ಮಾಸ್ಕ್ ಧರಿಸದೇ ಸಾರ್ವಜನಿಕವಾಗಿ ಓಡಾಡುತ್ತಿರುವವರಿಗೆ ಪೋಲೀಸ್ ಸಹಾಯದೊಂದಿಗೆ ಪ್ರತೀ ನಿತ್ಯ ಸುಮಾರು 30 ರಿಂದ 35 ಜನರಿಗೆ ದಂಡವಿಧಿಸಲಾಗುತ್ತಿದೆ ಎಂದು ಸಭೆಯಲ್ಲಿ ಮಾರ್ಷಲ್ ರವರು ವಿವರಿಸಿದರು.

**3. ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

ಘನತ್ಯಾಜ್ಯ ನಿರ್ವಹಣೆಯ ಸಂಬಂಧ ವಾರ್ಡ್‌ನಲ್ಲಿ 19 ಆಟೋಗಳು, ಒಣ ಕಸ ಸಂಗ್ರಹಣಾ ಆಟೋ-03, ಹಾಗೂ 02 ಕಾಂಪ್ಯಾಕ್ಟರ್ ವಾಹನಗಳು ಘನತ್ಯಾಜ್ಯ ವಿಲೇವಾರಿಗಾಗಿ ನಿಯೋಜಿಸಲಾಗಿರುತ್ತದೆಂದು ವಾರ್ಡ್ ಸಮಿತಿ ಸಭೆಯಲ್ಲಿ ಹಿರಿಯ ಆರೋಗ್ಯ ಪರಿವೀಕ್ಷಕರು ರವರು ತಿಳಿಸಿದರು. ಕಿರಿಯ ಆರೋಗ್ಯಪರಿವೀಕ್ಷಕರು ವಾರ್ಡ್‌ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರುಗಳಿಗೆ ಶೌಚಾಲಯದ ವ್ಯವಸ್ಥೆ ಇಲ್ಲದೆ ತೊಂದರೆ ಉಂಟಾಗುತ್ತಿದ್ದು, ತುರ್ತಾಗಿ ಶೌಚಾಲಯದ ವ್ಯವಸ್ಥೆಯನ್ನು ಕಲ್ಪಿಸಿಕೊಡಲು ಸಂಬಂಧಪಟ್ಟ ಮೇಲಾಧಿಕಾರಿಗಳ ಜೊತೆ ಚರ್ಚಿಸಲು ಸಭೆಯಲ್ಲಿ ಕೋರಿದರು. ಸದರಿ ವಿಷಯದ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳ ಜೊತೆ ಚರ್ಚಿಸಲು ನೋಡಲ್ ಅಧಿಕಾರಿಗಳು ವಾರ್ಡ್ ಅಭಿಯಂತರರಿಗೆ ತಿಳಿಸಿದರು.

**4. ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

ದಾಸರಹಳ್ಳಿ ವಾರ್ಡ್ ನಂ.15ರಲ್ಲಿ 2019-20ನೇ ಸಾಲಿನ ವಾರ್ಷಿಕ ಕಾರ್ಯಕ್ರಮ ಪಟ್ಟಿಯ ಅನುದಾನದಲ್ಲಿ ಚರಂಡಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯುವ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ ಹಾಗೂ ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿ ಚರಂಡಿಗಳ ಮೇಲೆ ಅಳವಡಿಸಿದ್ದ ಸ್ಲ್ಯಾಬ್‌ಗಳು ಹಾಳಾಗಿರುವ/ತುಂಡಾಗಿರುವ ಸ್ಲ್ಯಾಬ್‌ಗಳನ್ನು ತೆರವುಗೊಳಿಸಿ, ಹೊಸದಾಗಿ ಸ್ಲ್ಯಾಬ್‌ಗಳನ್ನು ಅಳವಡಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ ಎಂದು ಸಭೆಯಲ್ಲಿ ಸಹಾಯಕ ಅಭಿಯಂತರರು ತಿಳಿಸಿದರು.

Scanned By Scanner Go

## 5. ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ.

ಈಗ ಬೇಸಿಗೆಕಾಲ ಪ್ರಾರಂಭವಾಗಿರುವುದರಿಂದ ದಾಸರಹಳ್ಳಿ ವಾರ್ಡ್ ವ್ಯಾಪ್ತಿಯಲ್ಲಿನ ಸಾರ್ವಜನಿಕರಿಗೆ ನೀರಿನ ಅಭಾವ ಹೆಚ್ಚಾಗಿದ್ದು, 2019-20ನೇ ಸಾಲಿನಲ್ಲಿ ನೀರು ಸರಬರಾಜು ಅನುದಾನದಲ್ಲಿ ರೂ.20.00 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ಸದರಿ ಕಾಮಗಾರಿಯನ್ನು ಕೈಗೊಳ್ಳಲು ಈಗಾಗಲೇ ಗುತ್ತಿಗೆದಾರರಿಗೆ ಕಾರ್ಯಾದೇಶ ನೀಡಲಾಗಿದ್ದು, ಶೀಘ್ರವೇ ಕಾಮಗಾರಿಯನ್ನು ಕೈಗೊಳ್ಳಲು ಗುತ್ತಿಗೆದಾರರಿಗೆ ಸೂಚಿಸಲಾಗುವುದು ಎಂದು ಸಹಾಯಕ ಅಭಿಯಂತರರು, ಸಭೆಯಲ್ಲಿ ತಿಳಿಸಿದರು.

## 6. ವಿದ್ಯುತ್ ಸರಬರಾಜು, ಬೆಸ್ಕಾಂಗೆ ಸಂಬಂಧಿಸಿದ ಬಗ್ಗೆ.

ದಾಸರಹಳ್ಳಿ ವಾರ್ಡ್‌ನ ಜಾಲಹಳ್ಳಿ ವೃತ್ತದಿಂದ ಅಯ್ಯಪ್ಪ ದೇವಸ್ಥಾನದವರೆಗೆ ಬೀದಿ ದೀಪಗಳ ವ್ಯವಸ್ಥೆಗಾಗಿ ಅಳವಡಿಸಿರುವ ಸಂಪರ್ಕ ಲೈನ್ ತುಂಡಾಗಿದ್ದು, ಬೀದಿ ದೀಪಗಳು ಕಾರ್ಯ ನಿರ್ವಹಿಸುತ್ತಿರುವುದಿಲ್ಲ ಎಂದು ವಾರ್ಡ್ ಸದಸ್ಯರು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ವಿದ್ಯುತ್ ಇಲಾಖೆಯವರು ಪ್ರತಿಕ್ರಿಯಿಸಿ ಸದರಿ ಕಾಮಗಾರಿಯನ್ನು ಕೈಗೊಳ್ಳಲು ಟೆಂಡರ್ ಕರೆಯಬೇಕಾಗಿದ್ದು, ಟೆಂಡರ್ ಕರೆದು ಗುತ್ತಿಗೆದಾರರನ್ನು ನೇಮಿಸಿದ ನಂತರ ಸದರಿ ಕಾಮಗಾರಿಯನ್ನು ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿದರು.

ಅಂತಿಮವಾಗಿ ನೋಡೆಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿಗಳು ಮಾತನಾಡಿ, ಸಕಾಲದಲ್ಲಿ ಸಾರ್ವಜನಿಕರ ಕುಂದು ಕೊರತೆಗಳ ಬಗ್ಗೆ ಸ್ಪಂದಿಸಿ ಬಗೆಹರಿಸಲು, ಕ್ರಮ ತೆಗೆದುಕೊಂಡ ಎಲ್ಲಾ ಇಲಾಖೆಗಳ ಸಮನ್ವಯತೆ ಇಂದ ಕೆಲಸ ನಿರ್ವಹಿಸಲು ಹಾಗೂ ಮುಂದಿನ ಸಭೆಯಲ್ಲಿ ಸಾಧಿಸಬೇಕಾದ ಗುರಿ ಹಾಗೂ ಸಾಧನೆ ಬಗ್ಗೆ ಚರ್ಚಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

ವಂದನಾರ್ಪಣೆಯೊಂದಿಗೆ ನೋಡೆಲ್ ಅಧಿಕಾರಿಗಳು ಸಭೆಯನ್ನು ಮುಕ್ತಾಯಗೊಳಿಸಿದರು.

ಸದಸ್ಯ ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ. 15, ದಾಸರಹಳ್ಳಿ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡಲ್ ಅಧಿಕಾರಿ ಹಾಗೂ
ವಾರ್ಡ್ ಸಮಿತಿ ಅಧ್ಯಕ್ಷರು
ಮುಖ್ಯ ಕಾರ್ಯಪಾಲಕ ಅಭಿಯಂತರರು
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧಿಕಾರಿಗಳ ಮಾಹಿತಿಗಾಗಿ

1) ಮಾನ್ಯ ವಿಶೇಷ ಆಯುಕ್ತರು, ಬಿಬಿಎಂಪಿ, ಬೆಂಗಳೂರು ರವರ ಅವಗಾಹನೆಗಾಗಿ ಮಂಡಿಸಿದೆ.
2) ಮಾನ್ಯ ಜಂಟಿ ಆಯುಕ್ತರು (ದಾಸರಹಳ್ಳಿ) ವಲಯ ರವರ ಅವಗಾಹನೆಗಾಗಿ ಮಂಡಿಸಿದೆ.
3) ಮುಖ್ಯ ಅಭಿಯಂತರರು, (ದಾಸರಹಳ್ಳಿ) ವಲಯರವರ ಅವಗಾಹನೆಗಾಗಿ ಮಂಡಿಸಿದೆ.
4) ಉಪ ನಿಯಂತ್ರಕರು (ಹಣಕಾಸು) ದಾ.ವ ರವರ ಮಾಹಿತಿಗಾಗಿ ಕಳುಹಿಸಿದೆ.
5) ಕಾರ್ಯಪಾಲಕ ಅಭಿಯಂತರರು, ದಾ.ವಿ ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಾರ್ಯಪಾಲಕ ಅಭಿಯಂತರರು (ಟಿ.ದಾ.ಉ.ವಿ) ರವರ ಮಾಹಿತಿಗಾಗಿ ಕಳುಹಿಸಿದೆ
7) ಸಹಾಯಕ ಕಂದಾಯ ಅಧಿಕಾರಿ (ದಾ.ಉ.ವಿ) ಬಿಬಿಎಂಪಿ, ಬೆಂಗಳೂರು ರವರ ಮಾಹಿತಿಗಾಗಿ ಕಳುಹಿಸಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರಿಗೆ ಸಲ್ಲಿಸಿದೆ
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಸಲ್ಲಿಸಿದೆ.
10) ಕಛೇರಿ ಪ್ರತಿ.

Scanned By Scanner Go